## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 117(135) |
| ಸದಸ್ಯರ ಹೆಸರು | ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 28.01.2026 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನಲ್ಲಿ ಕೆಂಪಾಪುರದಲ್ಲಿ ನಾಡಪ್ರಭು ಕೆಂಪೇಗೌಡ ಸಮಾಧಿಗೆ 4 ಎಕರೆ ಸ್ಥಳವಿದ್ದು ಕೆಂಪೇಗೌಡ ವೀರ ಸಮಾಧಿಯನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು; | ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಕೆಂಪಾಪುರದಲ್ಲಿ ಈಗಾಗಲೇ 4.24 ಗುಂಟೆ ಜಮೀನನ್ನು ಮತ್ತು 48693.5 ಚದರಡಿ ಗ್ರಾಮಠಾಣ ನಿವೇಶನವನ್ನು ರೂ.15.08 ಕೋಟಿಗಳ ವೆಚ್ಚದಲ್ಲಿ ರೈತರಿಂದ ನೇರ ಖರೀದಿ ಮಾಡಲಾಗಿದ್ದು, ಪ್ರಸ್ತುತ ಹೆಚ್ಚುವರಿಯಾಗಿ 10.00 ಎಕರೆ ಜಾಗವನ್ನು ಭೂ ಸ್ವಾಧೀನಪಡಿಸಿಕೊಳ್ಳಲು ವಿಶೇಷ ಭೂ ಸ್ವಾಧೀನಾಧಿಕಾರಿಗಳು, ರಾಮನಗರ ಜಿಲ್ಲೆ, ರಾಮನಗರ ಇವರಿಂದ ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. |
| ಆ) | ಅಭಿವೃದ್ಧಿ ಕಾಮಗಾರಿ ಪ್ರಾರಂಭಿಸಿದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ; | ದಿನಾಂಕ:24.03.2025ರಲ್ಲಿ ಮಾಗಡಿ ವಿಧಾನಸಭಾ ಕ್ಷೇತ್ರದ ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡ ಕೋಟೆ ಮತ್ತು ವೀರ ಸಮಾಧಿಯ ಅಭಿವೃದ್ಧಿಗಾಗಿ ಕಾಮಗಾರಿಯನ್ನು ಕೈಗೊಳ್ಳಲು ಬಿಬಿಎಂಪಿ ವತಿಯಿಂದ ರೂ.83.00 ಕೋಟಿಗಳ ಅನುದಾನವನ್ನು ನಗರೋತ್ಥಾನ ಅಡಿಯಲ್ಲಿ ಬಿಡುಗಡೆ ಮಾಡಲಾಗಿರುತ್ತದೆ.<br><br>ಸದರಿ ಕಾಮಗಾರಿಯು ಪ್ರಾರಂಭದ ಹಂತದಲ್ಲಿರುತ್ತದೆ. |
| ಇ) | ಅಭಿವೃದ್ಧಿ ಪಡಿಸಲು ಸರ್ಕಾರ ಬಿಡುಗಡೆ ಮಾಡಿರುವ ಮೊತ್ತವೆಷ್ಟು? | |

ಕಂಇ 15 ಆರ್‌ಬಿಎ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು